## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 377

ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ (ಡಿ.ಟಿ.ಎಸ್)
(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 19.08.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕ ಬಸ್‌ಗಳಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ; ಹೊಸ ಮಾರ್ಗಗಳಿಗೆ ಬಸ್‌ಗಳನ್ನು ಮಂಜೂರು ಮಾಡುವ ಕ್ರಮ ಕೈಗೊಳ್ಳಲಾಗಿದೆಯೇ; | ರಾಜ್ಯದ ನಾಲ್ಕು ಸಾರಿಗೆ ನಿಗಮಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ವ್ಯಾಪ್ತಿಯಲ್ಲಿ 32977 ಗ್ರಾಮಗಳು ಇದ್ದು, ಇದರಲ್ಲಿ 31,228 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ ಹಾಗೂ 1749 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಿರುವುದಿಲ್ಲ.<br>ಸಾರಿಗೆ ಸೌಲಭ್ಯ ಒದಗಿಸದೇ ಇರುವ ಗ್ರಾಮಗಳ ಪೈಕಿ 325 ಗ್ರಾಮಗಳಿಗೆ ಭಾರಿ ವಾಹನಗಳ ಸಂಚಾರಕ್ಕೆ ಯೋಗ್ಯ ರಸ್ತೆ ಇರುವುದಿಲ್ಲ.<br>ವಿದ್ಯಾರ್ಥಿಗಳು ಮತ್ತು ಉದ್ಯೋಗಿಗಳಿಗೆ ಅನುಕೂಲವಾಗುವಂತೆ ಬೆಳಗ್ಗೆ ಮತ್ತು ಸಂಜೆ ಹೆಚ್ಚುವರಿ ಬಸ್‌ಗಳ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:<br>• ಶಕ್ತಿ ಯೋಜನೆ ಜಾರಿಗೂ ಮೊದಲು ಕರ್ನಾಟಕ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ವತಿಯಿಂದ 21164 ಷೆಡ್ಯೂಲ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ ಪ್ರಸ್ತುತ 24136 ಷೆಡ್ಯೂಲ್‌ಗಳನ್ನು ಮಾಡಲಾಗುತ್ತಿದೆ. ಅಂದರೆ, ಪ್ರತಿದಿನ 2972 ಹೆಚ್ಚುವರಿ ಷೆಡ್ಯೂಲ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>• ಶಕ್ತಿ ಯೋಜನೆ ಜಾರಿಗೂ ಮೊದಲು ಕರ್ನಾಟಕ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ವತಿಯಿಂದ 154955 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 185331 ಟ್ರಿಪ್ ಗಳನ್ನು ಮಾಡಲಾಗುತ್ತಿದೆ. |
| ಆ. | ವಿದ್ಯಾರ್ಥಿಗಳು ಮತ್ತು ಉದ್ಯೋಗಿಗಳಿಗೆ ಅನುಕೂಲವಾಗುವಂತೆ ಬೆಳಗ್ಗೆ ಮತ್ತು ಸಂಜೆ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | |
| ಇ. | ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳಲ್ಲಿ ಬಸ್ ಸಂಪರ್ಕವಿಲ್ಲದ ಗ್ರಾಮಗಳನ್ನು ಗುರುತಿಸಿ ಹೊಸ ಬಸ್ ಮಾರ್ಗಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಕ್ರಮಗಳೇನು; | |

| | | |
|---|---|---|
| | | ಪ್ರತಿದಿನ 30376 ಹೆಚ್ಚುವರಿ ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>• ಪ್ರಸ್ತುತ, ಕ್ರಿಯಾ ಯೋಜನೆಯನ್ವಯ 2026-27ನೇ ಸಾಲಿನಲ್ಲಿ ಅವಶ್ಯಕತೆಗೆ ಅನುಗುಣವಾಗಿ ಹೊಸ ಷೆಡ್ಯೂಲ್‌ಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿರುತ್ತದೆ.<br>• ಹಾಲಿ ನಿಗಮದಲ್ಲಿ ಹೊಸ ವಾಹನ ಮತ್ತು ಚಾಲನಾ ಸಿಬ್ಬಂದಿ ಕೊರತೆಯಿದ್ದು, ನಿಗಮಕ್ಕೆ ಹೊಸ ವಾಹನ ಸೇರ್ಪಡೆ ಮತ್ತು ಸಿಬ್ಬಂದಿ ನೇಮಕಾತಿಯನ್ನು ಪರಿಗಣಿಸಿ ಹಂತ ಹಂತವಾಗಿ ಸಾರಿಗೆ ಸೌಲಭ್ಯವಿಲ್ಲದ ಗ್ರಾಮಗಳಿಗೆ ಬಸ್ ಸೌಲಭ್ಯ ಒದಗಿಸಲು ಕ್ರಮವಹಿಸಲಾಗುತ್ತಿದೆ.<br>ಮುಂದುವರೆದು, ಸಾರಿಗೆ ಸೌಲಭ್ಯವಿಲ್ಲದ ಗ್ರಾಮಗಳಿಗೆ ಬೇಡಿಕೆಗೆ ಅನುಗುಣವಾಗಿ ಸದರಿ ಗ್ರಾಮಗಳಿಗೆ ಹಂತ-ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸುವ ಪ್ರಕ್ರಿಯೆಯು ನಿರಂತರವಾಗಿ ಜಾರಿಯಲ್ಲಿರುತ್ತದೆ. |
| **ಈ.** | ಮಹಿಳೆಯರು, ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರಿಕರಿಗೆ ಸುರಕ್ಷಿತ ಪ್ರಯಾಣ ಕಲ್ಪಿಸಲು ಬಸ್‌ಗಳಲ್ಲಿ ಸಿಸಿಟಿವಿ ತುರ್ತು ಸಂಪರ್ಕ ವ್ಯವಸ್ಥೆ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ; | ಮಹಿಳೆಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರಿಕರಿಗೆ ಸುರಕ್ಷಿತ ಪ್ರಯಾಣಕ್ಕಾಗಿ ನಾಲ್ಕು ಸಾರಿಗೆ ಸಂಸ್ಥೆ/ನಿಗಮಗಳಲ್ಲಿ ಕೈಗೊಂಡಿರುವ ಸುರಕ್ಷತಾ ಕ್ರಮಗಳ ವಿವರ ಕೆಳಕಂಡಂತಿದೆ:<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:**<br><br>ನಿಗಮದ 2311 ಸಂಖ್ಯೆಯ ಬಸ್ಸುಗಳಲ್ಲಿ Vehicle Location & Tracking Device, Panic Buttons ಅಳವಡಿಸಲಾಗಿರುತ್ತದೆ. 1688 ಸಂಖ್ಯೆ ಬಸ್ಸುಗಳಲ್ಲಿ Front & Rear camera ಅಳವಡಿಸಲಾಗಿರುತ್ತದೆ. 1125 ಸಂಖ್ಯೆಯ ಬಸ್ಸುಗಳಲ್ಲಿ Front, Rear & saloon camera, ಅಳವಡಿಸಲಾಗಿರುತ್ತದೆ. ಮುಂದಿನ ದಿನಗಳಲ್ಲಿ ಎಲ್ಲಾ ಹೊಸ ಬಸ್ಸುಗಳಲ್ಲಿ Front, Rear & saloon camera and Fire Detection & Suppression system, Vehicle Location & Tracking Device and Panic Buttons ಅಳವಡಿಸಲಾಗಿದೆ.<br><br>**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:**<br>ಸಂಸ್ಥೆಯ ಎಲ್ಲಾ ಬಸ್‌ಗಳಲ್ಲಿ ಸಿಸಿಟಿವಿಯನ್ನು ಅಳವಡಿಸಿದೆ. ತುರ್ತು ಸಂಪರ್ಕ ಹಾಗೂ ಸುರಕ್ಷತಾ ವ್ಯವಸ್ಥೆಗಳಿಗಾಗಿ ಸಂಸ್ಥೆಯ ಎಲ್ಲಾ ಬಸ್ಸುಗಳಲ್ಲಿ ಜಿಪಿಎಸ್ ಯಂತ್ರಗಳನ್ನು ಹಾಗೂ ಪ್ಯಾನಿಕ್ ಬಟನ್‌ಗಳನ್ನು ಅಳವಡಿಸಲಾಗಿರುತ್ತದೆ. |

ನಮ್ಮ ಬಿಎಂಟಿಸಿ ಮೊಬೈಲ್ ಆಪ್‌ನಲ್ಲಿ ಎಸ್‌ಓಎಸ್ ಬಟನ್ ಅನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಬಸ್ಸಿನಲ್ಲಿ ಯಾವುದೇ ಅನುಚಿತ/ಅಹಿತಕರ ಘಟನೆ ನಡೆದಲ್ಲಿ ಸದರಿ ವೈಶಿಷ್ಟತೆಯನ್ನು ಬಳಸ ಬಹುದಾಗಿರುತ್ತದೆ.

<u>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**</u>

ಸಂಸ್ಥೆಯಲ್ಲಿ ಸಂಚರಿಸುತ್ತಿರುವ ಒಟ್ಟು 1384 ಬಿಎಸ್-6 ಹಾಗೂ 100 ಬಿಎಸ್-4 ಬಸ್‌ಗಳೊಂದಿಗೆ ಒಟ್ಟು 1484 ವಾಹನಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿರುತ್ತದೆ ಹಾಗೂ CMVR ಗಳನ್ವಯ AIS-052, AIS-140, AIS-153ರಂತೆ PIS, VLTD & Panic Buttons, GPS, CC Camera, Hooters, Emergency Exits, FDAS/FDSS, Electronic vehicle stability control, ABS ಗಳಂತಹ ಸುರಕ್ಷತಾ ವ್ಯವಸ್ಥೆಗಳನ್ನು ಅಳವಡಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.

<u>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**</u>

ನಿಗಮದ 1139 ವಾಹನಗಳಿಗೆ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ.

ಒಟ್ಟು 1185 ಬಿಎಸ್-6 ವಾಹನಗಳಿಗೆ AIS-140 ಅನ್ವಯ VLTS and Panic Button ಅಳವಡಿಸಲಾಗಿರುತ್ತದೆ. ನಿಗಮದ 500 ಹಳೆಯ ಬಸ್ಸುಗಳಿಗೆ ಕ್ಯಾಮರಾಗಳನ್ನು ಹಾಗೂ ಸುಮಾರು 3000 ಹಳೆಯ ಬಸ್ಸುಗಳಿಗೆ VLTSಗಳನ್ನು ಅಳವಡಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಇದನ್ನು ಹೊರತುಪಡಿಸಿ ಬಸ್ಸಿನ ಸುರಕ್ಷತೆ ಸಲುವಾಗಿ ಈ ಕೆಳಗಿನ ಕ್ರಮಗಳನ್ನು ಸಹ ಕೈಗೊಳ್ಳಲಾಗಿದೆ.

- Automotive Industry Standrad (AIS)-052 Bus Body Code and AIS-135 ಪ್ರಕಾರ ನಿಗಮದ ಪ್ರತಿ ಬಸ್ಸುಗಳಲ್ಲಿ ಒಟ್ಟು 10 kg ಅಗ್ನಿ ನಿರೋಧಕ (Fire Extinguisher) ಉಪಕರಣಗಳನ್ನು ಅಳವಡಿಸಲಾಗಿದೆ.
- ಬಿಎಸ್-6 ಮಾದರಿಯ ವೇಗದೂತ ಬಸ್ಸುಗಳಲ್ಲಿ Fire Detection and Alaram System (FDAS) ಅಳವಡಿಸಲಾಗಿದೆ.
- ಬಿಎಸ್-6 ಮಾದರಿಯ ಸ್ಲೀಪರ್ ವಾಹನಗಳಲ್ಲಿ Fire Detection and Supression System (FDSS) ಅಳವಡಿಸಲಾಗಿದೆ.

| | | |
|---|---|---|
| ಉ. | ಬಸ್ ಪಾಸ್ ದರ, ವಿದ್ಯಾರ್ಥಿ ಬಸ್ ಪಾಸ್ ಮತ್ತು ಹಿರಿಯ ನಾಗರಿಕರ ಪ್ರಯಾಣ ಸೌಲಭ್ಯಗಳನ್ನು ಇನ್ನಷ್ಟು ಸರಳಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | 2026-27ನೇ ಶೈಕ್ಷಣಿಕ ವರ್ಷದಿಂದ, ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸುಗಳನ್ನು ರಾಜ್ಯಾದ್ಯಂತ 366 ಬೆಂಗಳೂರು-ಒನ್, ಕರ್ನಾಟಕ-ಒನ್ ಹಾಗೂ ಗ್ರಾಮ-ಒನ್ ಕೌಂಟರ್‌ಗಳ ಮೂಲಕ ವಿತರಿಸಲಾಗುತ್ತಿದೆ.<br><br>ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆ/ನಿಗಮಗಳು ಇಡಿಸಿಎಸ್ ಇಲಾಖೆಯ ಸೇವಾಸಿಂಧು ಪೋರ್ಟಲ್ ಮೂಲಕ ಸಂಪೂರ್ಣ ಗಣಕೀಕೃತವಾಗಿ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು ವಿತರಿಸುತ್ತಿವೆ.<br><br>ಪ್ರಸ್ತುತ, 60 ವರ್ಷ ಮತ್ತು ಅದಕ್ಕೂ ಹೆಚ್ಚು ವಯಸ್ಸಿನ ಕರ್ನಾಟಕ ರಾಜ್ಯದ ಹಿರಿಯ ನಾಗರಿಕರಿಗೆ ಸಾರಿಗೆ ನಿಗಮಗಳ ನಗರ/ನಗರ ಹೊರವಲಯ, ಸಾಮಾನ್ಯ, ವೇಗದೂತ, ಅರೆ ಸುವಿಹಾರಿ ಮತ್ತು ರಾಜಹಂಸ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯ ಮತ್ತು ಅಂತರರಾಜ್ಯ ಪ್ರಯಾಣಕ್ಕೆ ಗುರುತಿನ ಚೀಟಿ ಆಧಾರದಲ್ಲಿ ಶೇ.25ರಷ್ಟು ಪ್ರಯಾಣ ದರ ರಿಯಾಯಿತಿ ನೀಡಲಾಗುತ್ತಿದೆ.<br><br>ಹಿರಿಯ ನಾಗರಿಕರಿಗೆ ಆನ್‌ಲೈನ್ ಮೂಲಕ ಕಾಯ್ದಿರಿಸುವ ಮುಂಗಡ ಟಿಕೆಟ್ ಹಾಗೂ ನಿರ್ವಾಹಕರು ವಿತರಿಸುವ ಇಟಿಎಂ ಟಿಕೆಟ್ ಮೂಲಕ ರಿಯಾಯಿತಿ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ಟಿಡಿ 211 ಟಿಸಿಕ್ಯೂ 2026

(ಬಿ.ಎಸ್. ಸುರೇಶ)
ಸಾರಿಗೆ ಸಚಿವರು